ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಮೀಸಲಾದ ಏಕಮಾತ್ರ ಕನ್ನಡ ಮಾಸಪತ್ರಿಕೆ

# ಸಹಕಾರ ವಾರ್ತಾಪತ್ರಿಕೆ

ಕರ್ನಾಟಕ ರಾಜ್ಯ
ಸಹಕಾರ ಪತ್ತಿನ ಸಂಘಗಳ
ಮಹಾಮಂಡಳದ
ಪ್ರಕಟಣೆ

ಸಂಪುಟ : 2 । ಸಂಚಿಕೆ : 10 | ಡಿಸೆಂಬರ್ : 2020 | ಪುಟಗಳು : 20 । ಬೆಲೆ : 25/–



## ಬೆಂಗಳೂರಿನಲ್ಲಿ 67ನೇ ಅಖಿಲ ಭಾರತ ಸಹಕಾರ ಸಪ್ತಾಹ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರಿಂದ ಉದ್ಘಾಟನೆ



ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರಿಂದ
ಸಹಕಾರ ಕ್ಷೇತ್ರದಲ್ಲಿ ಶ್ರೇಷ್ಠ ಸಾಧನೆ ಮಾಡಿದ
ಶ್ರೀಮತಿ ಕೆ. ಲಲಿತ ಜಿ.ಟಿ. ದೇವೇಗೌಡ ಅವರಿಗೆ
"ಸಹಕಾರ ರತ್ನ" ಪ್ರಶಸ್ತಿ ಪ್ರದಾನ

# ಶ್ರೀಮತಿ ಕೆ.ಲಲಿತ ಜಿ.ಟಿ. ದೇವೇಗೌಡ ಅವರಿಗೆ ಮುಖ್ಯಮಂತ್ರಿ ಅವರಿಂದ ಸಹಕಾರ ರತ್ನ ಪ್ರಶಸ್ತಿ ಪ್ರದಾನ





ರಾಜ್ಯದ ಸಹಕಾರ ಚಳುವಳಿಯು ದೇಶದ ಗಮನ ಸೆಳೆಯುತ್ತಿದೆ. ವಿಶೇಷವಾಗಿ ಯುವಜನರ, ಮಹಿಳೆಯರು ಈ ಕ್ಷೇತ್ರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ತೊಡಗಿಸಿಕೊಂಡು ಸದಸ್ಯರ ಆರ್ಥಿಕ ಸ್ವಾವಲಂಬನೆಗೆ ಅವಿರತವಾಗಿ ಶ್ರಮಿಸುತ್ತಿದ್ದಾರೆ.

ಅಂಥ ಮಹಿಳಾ ಸಹಕಾರಿಗಳಲ್ಲಿ ಅಗ್ರಗಣ್ಯರ ಸಾಲಿನಲ್ಲಿ ಮೈಸೂರಿನ ಶ್ರೀಮತಿ ಕೆ.ಲಲಿತ ಜಿ.ಟಿ.ದೇವೇಗೌಡರೂ ಒಬ್ಬರು. ಶ್ರೀಯುತರು ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಅಧ್ಯಕ್ಷರಾಗಿ ಮಾರ್ಗದರ್ಶನ ಮಾಡುತ್ತಿದ್ದಾರೆ. ಕಳೆದ ಒಂದು ದಶಕಕ್ಕೂ ಹೆಚ್ಚಿನ ಅವಧಿಯಿಂದ ಸಹಕಾರ ಕ್ಷೇತ್ರದಲ್ಲಿ ತೊಡಗಿಸಿಕೊಂಡಿರುವ ಇವರು 2008ರಲ್ಲಿ ಹುಣಸೂರಿನಲ್ಲಿ ಶ್ರೀ ಲಕ್ಷ್ಮಿ ಮಹಿಳಾ ವಿವಿಧೋದ್ದೇಶ ಸಹಕಾರ ಸಂಘವನ್ನು ಸ್ಥಾಪಿಸಿ ಗ್ರಾಮೀಣ ಮಹಿಳೆಯರ ಆರ್ಥಿಕ ಬಲವರ್ಧನೆಗೆ ಶ್ರಮಿಸುತ್ತಾ ಬಂದಿದ್ದಾರೆ. ಜೊತೆಗೆ ಸಂಘವು ಸ್ವಂತ ಕಟ್ಟಡ ಹೊಂದುವಲ್ಲಿಯೂ ಪ್ರಮುಖ ಕಾರಣೀಭೂತರೂ ಆಗಿದ್ದಾರೆ. ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಆಡಳಿತಮಂಡಳಿಗೆ 2014ರಿಂದ ಎರಡು ಬಾರಿ ಆಯ್ಕೆಯಾಗಿರುತ್ತಾರೆ. ತಮ್ಮದೇ ಆದ ಕೊಡುಗೆ ನೀಡುತ್ತಾ ಬಂದಿದ್ದಾರೆ. ರಾಜಕೀಯ ಕ್ಷೇತ್ರದ ಮೂಲಕ ಗ್ರಾಮೀಣ ಅಭಿವೃದ್ಧಿಗೆ ಒತ್ತು ನೀಡಲು ಮೈಸೂರು ಜಿಲ್ಲಾ ಪಂಚಾಯ್ತಿ ಸದಸ್ಯರಾಗಿಯೂ ಸೇವೆ ಸಲ್ಲಿಸಿದ್ದಾರೆ.

ಶ್ರೀಮತಿ ಕೆ.ಲಲಿತ ಜಿ.ಟಿ.ದೇವೇಗೌಡರು ಸಹಕಾರ ರಂಗದಲ್ಲಿ ಸಲ್ಲಿಸಿರುವ ಗಣನೀಯ ಸೇವೆಯನ್ನು ಪರಿಗಣಿಸಿ ರಾಜ್ಯ ಸರ್ಕಾರ 'ಸಹಕಾರ ರತ್ನ' ಪ್ರಶಸ್ತಿಗೆ ಆಯ್ಕೆ ಮಾಡಿ ದಿನಾಂಕ:14.11.2020ರಂದು ಬೆಂಗಳೂರಿನಲ್ಲಿ ನಡೆದ 67ನೇ ಅಖಿಲ ಭಾರತ ಸಹಕಾರ ಸಪ್ತಾಹ ಆಚರಣೆ ಸಂದರ್ಭದಲ್ಲಿ ಮುಖ್ಯಮಂತ್ರಿ ಶ್ರೀ ಬಿ.ಎಸ್.ಯಡಿಯೂರಪ್ಪ ಅವರು 'ಸಹಕಾರ ರತ್ನ' ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಿದ್ದಾರೆ. ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿಗಳು, ಸಚಿವರು, ಸಹಕಾರಿ ಮುಖಂಡರು ಉಪಸ್ಥಿತರಿದ್ದು ಶುಭಾಷಯಗಳನ್ನು ಸಲ್ಲಿಸಿದ್ದಾರೆ.

## ನಿರ್ದೇಶಕರಾಗಿ ಆಯ್ಕೆ



ಆತ್ಮಶಕ್ತಿ ವಿವಿಧೋದ್ದೇಶ ಸಹಕಾರಿ ಸಂಘದ ಅಧ್ಯಕ್ಷರಾದ **ಶ್ರೀ ಚಿತ್ತರಂಜನ್ ಬೋಳಾರ್** ರವರು ದಕ್ಷಿಣ ಕನ್ನಡ ಕೇಂದ್ರ ಸಹಕಾರ ಸಗಟು ಮಾರಾಟ ಸಂಘ (ನಿ.) ಜನತಾ ಬಜಾರ್, ಮಂಗಳೂರು ಇದರ ಆಡಳಿತ ಮಂಡಳಿಯ ನಿರ್ದೇಶಕರಾಗಿ ಮುಂದಿನ 5 ವರ್ಷಗಳ ಅವಧಿಗೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಶ್ರೀಯುತರು ಸಹಕಾರ ಕ್ಷೇತ್ರದ ಸಕ್ರೀಯ ಚಟುವಟಿಕೆಯೊಂದಿಗೆ ಸಹಕಾರ ಭಾರತಿ ಮಂಗಳೂರು ನಗರ ಜಿಲ್ಲೆ ಇದರ ಅಧ್ಯಕ್ಷರಾಗಿ, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ಬೆಂಗಳೂರು ಮತ್ತು ದ.ಕ. ಜಿಲ್ಲಾ ಸಹಕಾರ ಯೂನಿಯನ್ ಇದರ ನಿರ್ದೇಶಕರಾಗಿ ಅಲ್ಲದೆ ಹಲವಾರು ಸಂಘ – ಸಂಸ್ಥೆಗಳಲ್ಲಿ ಸಕ್ರೀಯ ಗುರುತಿಸಿಕೊಂಡಿದ್ದಾರೆ.

## ನಿರ್ದೇಶಕರಾಗಿ ಆಯ್ಕೆ



ಪತ್ತಿನ ಮಹಾಮಂಡಳದ ಉಪಾಧ್ಯಕ್ಷರಾದ **ಡಾ. ಬಿ.ಡಿ. ಭೂಕಾಂತ** ರವರು ಜಿಲ್ಲಾ ಸಹಕಾರ ಯೂನಿಯನ್, ಶಿವಮೊಗ್ಗ ಇದರ ನಿರ್ದೇಶಕರಾಗಿ ಆಯ್ಕೆಯಾಗಿರುತ್ತಾರೆ.

ಹಾಗೂ ಜಿಲ್ಲಾ ತೋಟೋತ್ಪನ್ನ ಬೆಳೆಗಾರರ ಮಾರಾಟ ಸಂಸ್ಕರಣ ಸಹಕಾರ ಸಂಘ ನಿ., ಶಿವಮೊಗ್ಗ ಜಿಲ್ಲಾ ಕೈಗಾರಿಕಾ ಸರಬರಾಜು ಮಾರಾಟ ಸಹಕಾರ ಸಂಘ ನಿ., ಶಿವಮೊಗ್ಗ, ಜಿಲ್ಲಾ ಬಸವೇಶ್ವರ ಗ್ರಾಹಕರ ಸಗಟು ಮಾರಾಟ ಸೌಹಾರ್ದ ಸಹಕಾರ ಸಂಘ ನಿ., ಶಿವಮೊಗ್ಗ, ತಾಲ್ಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘ ನಿ., ಈ ಸಂಸ್ಥೆಗಳಲ್ಲಿ ಅವಿರೋಧವಾಗಿ ಆಯ್ಕೆಯಾಗಿರುತ್ತಾರೆ.

# ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು


ನಂ.16, 1ನೇ ಮಹಡಿ, 1ನೇ ಅಡ್ಡರಸ್ತೆ, ಲಿಂಕ್‌ರಸ್ತೆ, ಮಲ್ಲೇಶ್ವರಂ, ಬೆಂಗಳೂರು–560003

Ph : 080-23564444, 23464033, 23464034 e-mail: ksccsfltd@gmail.com, info@ksccsf.org, www.ksccsf.org

ನೋಂದಣಿ ಸಂಖ್ಯೆ:ಯುಬಿಸಿ–3/98/ನೋಂದಣಿ/34547/2004–05 ದಿ:06.11.2004


## 16ನೇ ವಾರ್ಷಿಕ ಸಾಮಾನ್ಯ ಸಭೆಯ ನೋಟೀಸ್

ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು ಇದೆ 16ನೇ ವಾರ್ಷಿಕ ಸಾಮಾನ್ಯ ಸಭೆಯನ್ನು ದಿನಾಂಕ:22 ಡಿಸೆಂಬರ್ 2020 ಮಂಗಳವಾರ ಕರ್ನಾಟಕ ಸರ್ಕಾರದ ಸಇ 43ಸಿಎಲ್‌ಎಂ 2020(ಇ) ಆದೇಶದಂತೆ ವಾರ್ಷಿಕ ಸಾಮಾನ್ಯ ಸಭೆಯನ್ನು ವಿಡಿಯೋ ಕಾನ್ಫರೆನ್ಸ್ /ವರ್ಚುಯಲ್ ಮೀಟಿಂಗ್ ಮೂಲಕ ಝೂಮ್ ವಿಡಿಯೋ ವೆಬಿನಾರ್ ತಂತ್ರಜ್ಞಾನವನ್ನು ಬಳಸಿಕೊಂಡು ಬೆಂಗಳೂರಿನಲ್ಲಿ ಸಾಮಾನ್ಯ ಸಭೆಯನ್ನು ಬೆಳಗ್ಗೆ 11.00 ಘಂಟೆಗೆ ಕರೆಯಲಾಗಿದೆ. ಈ ಸಭೆಯಲ್ಲಿ ಮಾನ್ಯ ಸದಸ್ಯ ಸಹಕಾರ ಸಂಘಗಳು ತಮ್ಮ ಸಹಕಾರ ಸಂಘ ಇರುವ ಸ್ಥಳದಿಂದಲೇ ಕಂಪ್ಯೂಟರ್/ಲ್ಯಾಪ್‌ಟಾಪ್‌ಗಳ ಮೂಲಕ ಹಾಜರಿರಲು ಕೋರಿದೆ.

ಸಭೆಯ ನೋಟೀಸನ್ನು ಕಾರ್ಯಸೂಚಿ ಮತ್ತು ವಿವರವಾದ ಟಿಪ್ಪಣಿಗಳೊಂದಿಗೆ ಎಲ್ಲಾ ಅರ್ಹ ಸದಸ್ಯ ಸಹಕಾರ ಸಂಘಗಳಿಗೆ ಸಾಮಾನ್ಯ ಅಂಚೆ ಮೂಲಕ ಕಳುಹಿಸಲಾಗಿದೆ. ಸಭೆಯ ಕಾರ್ಯಸೂಚಿ, ಟಿಪ್ಪಣಿಗಳು ಮತ್ತು ಅರ್ಹ ಸದಸ್ಯರ ಪಟ್ಟಿಯು ಮಹಾಮಂಡಳದ ವೆಬ್‌ಸೈಟ್ www.ksccsf.org ನಲ್ಲಿ ಲಭ್ಯವಿರುತ್ತದೆ.

ಈ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ಭಾಗವಹಿಸುವ ಅರ್ಹ ಸಹಕಾರ ಸಂಘಗಳ ಡೆಲಿಗೇಟುಗಳು ತಮ್ಮ ಹೆಸರು, ಇಮೇಲ್ ಐಡಿ, ವಾಟ್ಸ್‌ಪ್ ಮೊಬೈಲ್ ಸಂಖ್ಯೆಯನ್ನು ದಿನಾಂಕ : 18.12.2020ರ ಒಳಗಾಗಿ ಮಹಾಮಂಡಳಕ್ಕೆ ಇಮೇಲ್ ಅಥವಾ ಅಂಚೆ ಮೂಲಕ ತಲುಪುವಂತೆ ಕಳುಹಿಸಲು ಕೋರಿದೆ. ನೋಟೀಸು ತಲುಪದ ಅರ್ಹ ಸಹಕಾರ ಸಂಘಗಳು ಈ ಪ್ರಕಟಣೆಯನ್ನೇ ವಾರ್ಷಿಕ ಸಾಮಾನ್ಯ ಸಭೆಯ ನೋಟೀಸು ಎಂದು ಪರಿಗಣಿಸಿ ಸಭೆಯಲ್ಲಿ ಹಾಜರಿರಲು ಕೋರಿದೆ.

ಸಹಿ/–

ದಿನಾಂಕ : 27.11.2020

**(ಆಶಾಲತಾ. ಪಿ)**

ಸ್ಥಳ : ಬೆಂಗಳೂರು

ಮುಖ್ಯಕಾರ್ಯನಿರ್ವಹಣಾಧಿಕಾರಿ (ಪ್ರ)

## ಜಾಹಿರಾತು ಮನವಿ

ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳವು ಪತ್ತಿನ ಸಹಕಾರ ಚಳವಳಿ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಪೂರಕವಾಗಿ ಮಾಸಿಕ ಸಹಕಾರ ಪತ್ರಿಕೆಯನ್ನು ಪ್ರಕಟ ಮಾಡುತ್ತಿದ್ದು, ಪತ್ತಿನ ಸಹಕಾರ ಚಳವಳಿಯ ಪೂರಕ ಚಟುವಟಿಕೆಗಳಿಗೆ ಪ್ರಚಾರ ನೀಡುತ್ತಾ ಬರುತ್ತಿದೆ. ರಾಜ್ಯದ ಪತ್ತಿನ ಸಹಕಾರ ಸಂಘಗಳು ತಮ್ಮ ಕಾರ್ಯಪ್ರಗತಿಯ ವಿವರಗಳನ್ನು ಜಾಹಿರಾತು ಮೂಲಕ ಪ್ರಕಟಿಸಿದ್ದಲ್ಲಿ ಉತ್ತಮ ಪ್ರಚಾರ ಪಡೆದುಕೊಳ್ಳಲು ಸಾಧ್ಯವಿದೆ. ಈ ನಿಟ್ಟಿನಲ್ಲಿ ಪತ್ತಿನ ಸಹಕಾರ ಸಂಘಗಳ ಮಹಾಮಂಡಳವು ರಿಯಾಯಿತಿ ದರದಲ್ಲಿ ಜಾಹಿರಾತುಗಳನ್ನು ಪ್ರಕಟಿಸಲು ಉತ್ಸುಕವಾಗಿದೆ. ಸಹಕಾರ ಸಂಸ್ಥೆಗಳು ಸಂಪೂರ್ಣ ಮಾಹಿತಿಗಳೊಂದಿಗೆ ಜಾಹಿರಾತುಗಳನ್ನು ನೀಡಲು ಕೋರಿದೆ. ಜಾಹಿರಾತು ದರಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡ ದೂರವಾಣಿ ಹಾಗೂ ಮೊಬೈಲ್ ಸಂಖ್ಯೆಗಳಿಗೆ ಸಂಪರ್ಕಿಸಲು ಕೋರಿದೆ.

ಮೊಬೈಲ್ ನಂ. 9008407988, ದೂರವಾಣಿ : 080 23564444, 23464033, 23464034

ಇ–ಮೇಲ್ : ksccsfltd@gmail.com, info@ksccsf.org, ವೆಬ್‌ಸೈಟ್ : www.ksccsf.org

## ಸಹಕಾರ ವಾರ್ತಾ ಪತ್ರಿಕೆಗೆ ಚಂದಾದಾರರಾಗಲು ಮನವಿ

ಕರ್ನಾಟಕ ಸಹಕಾರ ಪತ್ತಿನ ಸಂಘಗಳ ಮಹಾಮಂಡಳವು ಪ್ರಕಟಿಸುತ್ತಿರುವ ಮಾಸಿಕ ಸಹಕಾರ ವಾರ್ತಾ ಪತ್ರಿಕೆಗೆ ಈಗಾಗಲೇ ಚಂದಾದಾರರಾಗಿರುವ ಸದಸ್ಯ ಸಹಕಾರ ಸಂಘಗಳನ್ನು ಹೊರತುಪಡಿಸಿ ಇನ್ನುಳಿದ ಪತ್ತಿನ ಸಹಕಾರ ಸಂಘಗಳು "ಸಹಕಾರ ಮಾಸಿಕ ವಾರ್ತಾ ಪತ್ರಿಕೆ"ಗೆ ಚಂದಾದಾರರಾಗಲು ಈ ಮೂಲಕ ಮನವಿ ಮಾಡಲಾಗಿದೆ.

– **ಸಂಪಾದಕರು**

SAHAKARA VARTHA PATHRIKE KANNADA MONTHLY
RNI-REG NO : KARKAN/2018/75796
POST REG NO : KA/BGW-1816/2019-2021
POSTING DATE : 1 & 5TH EVERY MONTH
POSTED AT : P/C RMS BHAVAN, BANGALORE PSO, Blore-26
PUBLISHED ON : 29TH of Previous Month

# 67ನೇ ಅಖಿಲ ಭಾರತ ಸಹಕಾರ ಸಪ್ತಾಹ ಶುಭಾಷಯಗಳು

## ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಆಡಳಿತಮಂಡಳಿ



ಶ್ರೀಮತಿ ಕೆ. ಲಲಿತ ಜಿ.ಟಿ. ದೇವೇಗೌಡ
ಅಧ್ಯಕ್ಷರು



ಡಾ. ಬಿ.ಡಿ. ಭೂಕಾಂತ
ಉಪಾಧ್ಯಕ್ಷರು



ಶ್ರೀ ಸಿ.ಎಂ. ಮಾರೇಗೌಡ
ನಿರ್ದೇಶಕರು



ಶ್ರೀ ವಿ. ರಾಜು
ನಿರ್ದೇಶಕರು



ಡಾ. ಸಂಜಯ ಪಂ. ಹೊಸಮಠ
ನಿರ್ದೇಶಕರು



ಶ್ರೀ ಎಂ.ಜಿ. ನರೇಂದ್ರ ಕುಮಾರ
ನಿರ್ದೇಶಕರು



ಶ್ರೀ ಡಿ. ಚನ್ನಯ್ಯ
ನಿರ್ದೇಶಕರು



ಶ್ರೀ ಕೆ. ಕೃಷ್ಣಮೂರ್ತಿ
ನಿರ್ದೇಶಕರು



ಶ್ರೀ ಕೆ.ಕೆ. ಮಹೇಂದ್ರ ಪ್ರಸಾದ್‌ಗೌಡ
ನಿರ್ದೇಶಕರು



ಶ್ರೀ ಜಿ. ಮಲ್ಲಿಕಾರ್ಜುನಯ್ಯ
ನಿರ್ದೇಶಕರು



ಶ್ರೀ ತಮ್ಮಣ್ಣ ಬಿ. ಕೆಂಚರಡ್ಡಿ
ನಿರ್ದೇಶಕರು



ಶ್ರೀ ಧರೇಪ್ಪ ಎಂ. ಅಲಗೂರ
ನಿರ್ದೇಶಕರು



ಶ್ರೀ ಗುರುಪಾದಪ್ಪಗೌಡ ಬಿ. ಪಾಟೀಲ
ನಿರ್ದೇಶಕರು



ಶ್ರೀ ಹೊನ್ನಯ್ಯ ವಿ. ಹಿರೇಮಠ
ನಿರ್ದೇಶಕರು



ಶ್ರೀ ಪಿ.ಕೆ. ಜಯಕೃಷ್ಣೇಗೌಡ
ನಿರ್ದೇಶಕರು



ಶ್ರೀ ಶೇಖರಗೌಡ ಮಾಲಿ ಪಾಟೀಲ
ನಿರ್ದೇಶಕರು



ಶ್ರೀ ಹೆಚ್.ಟಿ. ನಾಗೇಶ್
ನಿರ್ದೇಶಕರು



ಶ್ರೀ ಡಿ.ಆರ್. ನಾಗೇಶಪ್ಪ
ನಿರ್ದೇಶಕರು



ಶ್ರೀ ಉಮೇಶ ಶಿ ಬಾಳಿ
ನಿರ್ದೇಶಕರು



ಶ್ರೀ ರವೀಂದ್ರ ಪ್ರಲ್ಹಾದ ಕಲಬುರ್ಗಿ
ನಿರ್ದೇಶಕರು



ಶ್ರೀ ಚಿತ್ತರಂಜನ್ ಬೋಳಾರ್
ನಿರ್ದೇಶಕರು



ಶ್ರೀ ಕೆ.ಎಸ್.ಗುರುಪ್ರಸಾದ್
ಸಲಹೆಗಾರರು



ಶ್ರೀಮತಿ ಪಿ.ಆಶಾಲತಾ
ಮುಖ್ಯಕಾರ್ಯನಿರ್ವಹಣಾಧಿಕಾರಿ (ಪ್ರ)

ಇಂದ : ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿ., ಬೆಂಗಳೂರು
ನಂ.16, 1ನೇ ಮಹಡಿ, 1ನೇ ಅಡ್ಡರಸ್ತೆ, ಲಿಂಕ್ ರಸ್ತೆ, ಮಲ್ಲೇಶ್ವರಂ, ಬೆಂಗಳೂರು–560003

Printed at : Biligiri Printers
Chamrajpet, Bengaluru - 18.